ಇ) ಸಾರ್ವಜನಿಕ ಹಿತದೃಷ್ಟಿಯಿಂದ ಬೆಳಗಾವಿಯಲ್ಲಿ ಕೆ.ಎ.ಟಿ.ಯನ್ನು ಯಾವಾಗ ಆರಂಭಿಸಲಾಗುವುದು?

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿ)

ಅ) ಇಂದ ಇ) ಬೆಳಗಾವಿಯಲ್ಲಿ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯನ್ನು ಸ್ಥಾಪಿಸಲು ತಾತ್ವಿಕವಾಗಿ ಸ್ಥಾಪಿಸಲು ನಿರ್ಣಯಿಸಲಾಗಿದೆ.

ಕುಡಿಯುವ ನೀರಿನ ಯೋಜನೆ

78(8); ಕೋನರೆಡ್ಡಿ ಎನ್.ಎಚ್. (ನವಲಗುಂದ)

ಅ) ಹುಬ್ಬಳ್ಳಿ–ಧಾರವಾಡ ಅವಳಿ ನಗರಗಳಿಗೆ ಕುಡಿಯುವ ನೀರನ್ನು ಪೂರೈಸಲು ಯಾವುದಾದರೂ ಹೊಸ ಯೋಜನೆಯನ್ನು ಕೈಗೆತ್ತಿಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಯಾವ ಹೊಸ ಯೋಜನೆಯನ್ನು ಕೈಗೆತ್ತಿಕೊಳ್ಳಲು ಸರ್ಕಾರ ಚಿಂತನೆ ನಡೆಸಿದೆ.

ಇ) ಈ ಹೊಸ ಯೋಜನೆಯಿಂದ ಅಧುನಿಕ ರೀತಿಯಲ್ಲಿ ದುರಸ್ತಿಗೊಳಿಸಿ ನವಲಗುಂದ, ಧಾರವಾಡ, ಹುಬ್ಬಳ್ಳಿ, ಕುಂದಗೋಳ ಮುಂತಾದ ತಾಲ್ಲೂಕುಗಳಿಗೆ ಶಾಶ್ವತ ಶುದ್ಧ ಕುಡಿಯುವ ನೀರಿನ ಯೋಜನೆಯನ್ನು ಜಾರಿಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ, ಈ ಯೋಜನೆಗೆ ಡಿ.ಪಿ.ಆರ್. ತಯಾರಿಸಿ ಸಚಿವ ಸಂಪುಟದ ಒಪ್ಪಿಗೆಯನ್ನು ಪಡೆಯಲಾಗಿದೆಯೇ;

ಉ) ಹಾಗಿದ್ದಲ್ಲಿ, ಈ ಯೋಜನೆಗಾಗಿ ಸರ್ಕಾರ ಅನುದಾನವನ್ನೇನಾದರು ನಿಗದಿಪಡಿಸಿ ಬಿಡುಗಡೆ ಮಾಡಿದೆಯೇ;

ಊ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದ ಅನುದಾನವನ್ನು ಬಿಡುಗಡೆ ಮಾಡಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ (ವಿವರಗಳನ್ನು ನೀಡುವುದು)?

ಶ್ರೀ ವಿನಯ್‌ಕುಮಾರ್ ಸೊರಕೆ (ಮಾನ್ಯ ನಗರಾಭಿವೃದ್ಧಿ ಸಚಿವರು)

ಅ) ಮತ್ತು ಆ) ₹ 1809.00 ಕೋಟಿ ಅಂದಾಜು ಮೊತ್ತದ ವಿಶ್ವ ಬ್ಯಾಂಕ್ ನೆರವಿನ "ಕರ್ನಾಟಕ ನಗರ ನೀರು ಸರಬರಾಜು ಆಧುನೀಕರಣ ಯೋಜನೆ" (ಹಂತ–I) ಯಡಿ ಹುಬ್ಬಳ್ಳಿ–ಧಾರವಾಡ, ಬೆಳಗಾವಿ ಮತ್ತು ಗುಲ್ಬರ್ಗಾ ಮಹಾನಗರ ಪಾಲಿಕೆ ವ್ಯಾಪ್ತಿಯ ಎಲ್ಲಾ ಪ್ರದೇಶಗಳಿಗೆ ನಿರಂತರ ನೀರು (24X7) ಸರಬರಾಜು ವ್ಯವಸ್ಥೆಯನ್ನು ಅನುಷ್ಠಾನಗೊಳಿಸಲು ಸರ್ಕಾರದ ಆದೇಶ ಸಂಖ್ಯೆ ನಅಇ 244 ಪಿಆರ್‌ಜೆ 2013, ದಿನಾಂಕ:07–11–2013 ರಲ್ಲಿ ಅನುಮೋದನೆ ನೀಡಲಾಗಿದೆ. (ಹುಬ್ಬಳ್ಳಿ–ಧಾರವಾಡ ನಗರದ ಅಂದಾಜು ₹ 763.00 ಕೋಟಿ).

ಇ) ಮೇಲ್ಕಂಡ ಯೋಜನೆಯನ್ನು ಹುಬ್ಬಳ್ಳಿ–ಧಾರವಾಡ, ಬೆಳಗಾವಿ ಮತ್ತು ಗುಲ್ಬರ್ಗಾ ಮಹಾ ನಗರಗಳಿಗಾಗಿ ರೂಪಿಸಲಾಗಿದೆ.

ಈ) ಅನ್ವಯಿಸುವುದಿಲ್ಲ.

ಉ) ಅನ್ವಯಿಸುವುದಿಲ್ಲ.

ಊ) ಅನ್ವಯಿಸುವುದಿಲ್ಲ.